## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1393
ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಮಧು ಜಿ.ಮಾದೇಗೌಡ
ಉತ್ತರಿಸಬೇಕಾದ ದಿನಾಂಕ : 22.08.2025
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕ್ರೈಸ್ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಶಾಲೆಗಳ ಸಂಖ್ಯೆ ಎಷ್ಟು; ಈ ಪೈಕಿ ಎಷ್ಟು ಶಾಲೆಗಳಲ್ಲಿ ಕ್ರೀಡಾ ಶಾಲೆಗಳನ್ನು ಪ್ರಾರಂಭಿಸಲು ಸರ್ಕಾರದ ಅನುಮೋದನೆ ದೊರೆತಿದೆ; (ಜಿಲ್ಲಾವಾರು ಮಾಹಿತಿ ನೀಡುವುದು) | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಕಾರ್ಯವ್ಯಾಪ್ತಿಯಲ್ಲಿ ಪರಿಶಿಷ್ಟ ಜಾತಿ-521, ಪರಿಶಿಷ್ಟ ವರ್ಗ-148 ಹಾಗೂ ಹಿಂದುಳಿದ ವರ್ಗದ-179 ವಸತಿ ಶಾಲೆಗಳನ್ನು ಸೇರಿ ಒಟ್ಟಾರೆ 848 ವಸತಿ ಶಾಲೆ/ಕಾಲೇಜುಗಳು ಕಾರ್ಯನಿರ್ವಹಿಸುತ್ತಿರುತ್ತವೆ.<br><br>ಆದೇಶ ಸಂಖ್ಯೆ : ಸಕಇ 96 ಮೊದೇಶಾ 2021 ದಿನಾಂಕ: 30-11-2021 ರಲ್ಲಿ ಕಂದಾಯ ವಿಭಾಗವಾರು 4 ಶಾಲೆಗಳನ್ನು ಉನ್ನತೀಕರಿಸಿ ಆದೇಶಿಸಲಾಗಿರುತ್ತದೆ.<br><br>ಆದೇಶ ಸಂಖ್ಯೆ : ಸಕಇ 324 ಎಂಡಿಎಸ್ 2022 ದಿನಾಂಕ: 02-11-2022 ರಲ್ಲಿ 37 ಶಾಲೆಗಳು ಕ್ರೀಡಾ ವಸತಿ ಶಾಲೆಗಳೆಂದು ಒಟ್ಟಾರೆ 41 ವಸತಿ ಶಾಲೆಗಳನ್ನು ಕ್ರೀಡಾ ವಸತಿ ಶಾಲೆಗಳೆಂದು ಆದೇಶಿಸಲಾಗಿರುತ್ತದೆ.<br><br>ಸರ್ಕಾರದ ಆದೇಶ ಸಂಖ್ಯೆ: ಸಕಇ-ಎಂಡಿಎಸ್ 49 2023, ದಿನಾಂಕ:23.11.2023 ರಲ್ಲಿ ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ 10 ವಸತಿ ಶಾಲೆಗಳನ್ನು ಕ್ರೀಡಾ ಶಾಲೆಗಳಾಗಿ ಆಯ್ಕೆ ಮಾಡಿ ಉತ್ಕೃಷ್ಟ ಮಟ್ಟದ ಕ್ರೀಡಾ ಸೌಲಭ್ಯಗಳನ್ನು ಒದಗಿಸಲು ಪ್ರತಿ ಶಾಲೆಗೆ ರೂ.2.00 ಕೋಟಿಗಳಂತೆ ಒಟ್ಟಾರೆ ರೂ, 20.00 ಕೋಟಿಗಳನ್ನು ಹಾಗೂ ಹೆಚ್ಚುವರಿ ಸೌಲಭ್ಯಗಳನ್ನು ಕಲ್ಪಿಸಲು ಪರಿಷ್ಕೃತ ಹೆಚ್ಚುವರಿ ಮೊತ್ತ ರೂ.3.57 ಕೋಟಿಗಳನ್ನು ನಿಗಧಿಪಡಿಸಿ ಅನುಮೋದನೆ ನೀಡಲಾಗಿದೆ. |
| ಆ) | ಕ್ರೈಸ್ ಸಂಸ್ಥೆಯು ಪ್ರಸ್ತುತ ಸಾಲಿನಲ್ಲಿ ಎಷ್ಟು ಶಾಲೆಗಳನ್ನು ಕ್ರೀಡಾ ಶಾಲೆಗಳೆಂದು ಪರಿವರ್ತಿಸಿದೆ; ಹಾಗೂ ಆ ಶಾಲೆಗಳಿಗೆ ಪ್ರಾಂಶುಪಾಲರಾಗಿ ದೈಹಿಕ ಶಿಕ್ಷಣ ಶಿಕ್ಷಕರನ್ನು ನೇಮಿಸಲಾಗಿದೆಯೆ; | 2025-26ನೇ ಸಾಲಿನಲ್ಲಿ ಯಾವುದೇ ವಸತಿ ಶಾಲೆಗಳನ್ನು ಕ್ರೀಡಾವಸತಿ ಶಾಲೆಗಳೆಂದು ಪರಿವರ್ತಿಸಿರುವುದಿಲ್ಲ. |
| ಇ) | ಕ್ರೈಸ್ ಸಂಸ್ಥೆಯ ಪ್ರಸ್ತುತ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರಿಗೆ ಕ್ರೀಡಾ ಶಾಲೆಗಳ ಪ್ರಾಂಶುಪಾಲರ ಹುದ್ದೆಯ ಪದೋನ್ನತಿಯನ್ನು ನಿರಾಕರಿಸಲು ಕಾರಣಗಳೇನು? | ಪ್ರಾಂಶುಪಾಲರು ಹುದ್ದೆಗೆ ಸಂಬಂಧಿಸಿದಂತೆ ಶಿಕ್ಷಣ ಇಲಾಖೆಯ ನೇಮಕಾತಿ ನಿಯಮಗಳಲ್ಲಿ ದೈಹಿಕ ಶಿಕ್ಷಕರಿಗೆ ಮುಖ್ಯ ಶಿಕ್ಷಕರ ಹುದ್ದೆಗೆ ಮುಂಬಡ್ತಿ ನೀಡಲು ಅವಕಾಶ ಕಲ್ಪಿಸಿರುವುದಿಲ್ಲ. ಈ ಹಿನ್ನೆಲೆಯಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿಗಳಲ್ಲಿ ಪ್ರಾಂಶುಪಾಲರ ಹುದ್ದೆಯ |

| | | |
|---|---|---|
| | | ಮುಂಬಡ್ತಿಯಲ್ಲಿ ದೈಹಿಕ ಶಿಕ್ಷಣ ಶಿಕ್ಷಕರಿಗೆ ಅವಕಾಶ ಕಲ್ಪಿಸಿರುವುದಿಲ್ಲ.<br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವೃಂದ ಮತ್ತು ನೇಮಕಾತಿ ವಿನಿಯಮಗಳನ್ವಯ ನೇರ ನೇಮಕಾತಿ ಮೂಲಕ ಶೇಕಡ ಇಪ್ಪತ್ತೈದರಷ್ಟು ಮತ್ತು ಸಂಯೋಜಿತ ಜ್ಯೇಷ್ಠತೆ ಕಮ್ ಮೆರಿಟ್ ಆಧಾರದ ಮೇಲೆ ಶಿಕ್ಷಕರ ವೃಂದದ ಪೈಕಿ ಬಡ್ತಿ ಮೂಲಕ ಶೇಕಡ ಎಪ್ಪತ್ತೈದರಷ್ಟು ಹುದ್ದೆಗಳನ್ನು, ಆಯಾ ವೃಂದದಲ್ಲಿನ ಸೇವಾವಧಿಯ ಆಧಾರದ ಮೇಲೆ ಜ್ಯೇಷ್ಠತೆ ಮೇರೆಗೆ 422 ಶಿಕ್ಷಕರಿಗೆ ಮತ್ತು ಹೆಚ್ಚುವರಿ ಪಟ್ಟಿಯಲ್ಲಿ 42 ಶಿಕ್ಷಕರಿಗೆ ಮುಂಬಡ್ತಿ ನೀಡಲಾಗಿರುತ್ತದೆ.<br>ಉಳಿದ ಇತರೆ ವೃಂದದ 362 (73 ಹೈ.ಕ. 289 ಉಳಿಕೆ ಮೂಲ ವೃಂದ) ಶಿಕ್ಷಕರನ್ನು ಕೌನ್ಸ್ ಲಿಂಗ್ ಮೂಲಕ ಸ್ಥಳ ನಿಯುಕ್ತಿಗೊಳಿಸಿ ಆದೇಶ ಹೊರಡಿಸಲಾಗಿರುತ್ತದೆ.<br>ಹೆಚ್ಚುವರಿಯಾಗಿ ಕಾಯ್ದಿರಿಸಿದ್ದ 40 ಶಿಕ್ಷಕರುಗಳಿಗೆ ಕೌನ್ಸ್ ಲಿಂಗ್ ಆಯೋಜಿಸಿ 34 ಶಿಕ್ಷಕರಿಗೆ ಪ್ರಾಂಶುಪಾಲರ ಹುದ್ದೆಗೆ ಸ್ಥಳ ನಿಯುಕ್ತಿಗೊಳಿಸಲಾಗಿರುತ್ತದೆ.<br>ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ 45 (13 ಹೈ.ಕ. 32 ಉಳಿಕೆ ಮೂಲ ವೃಂದ) ಶಿಕ್ಷಕರಿಗೆ ಮುಂಬಡ್ತಿ ನೀಡಿ, ಕೌನ್ಸ್ ಲಿಂಗ್ ಮೂಲಕ ಸ್ಥಳ ನಿಯುಕ್ತಿಗೊಳಿಸಲಾಗಿರುತ್ತದೆ.<br>2025 ರಲ್ಲಿ ಹೆಣ್ಣು ಮಕ್ಕಳ ವಸತಿ ಶಾಲೆಗಳ ಪ್ರಾಂಶುಪಾಲರ ಹುದ್ದೆಗೆ ಮಹಿಳಾ ಶಿಕ್ಷಕ ವೃಂದದಿಂದ ಮುಂಬಡ್ತಿ ಮೂಲಕ ಭರ್ತಿ ಮಾಡಲು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವೃಂದ ಮತ್ತು ನೇಮಕಾತಿ ವಿನಿಯಮಗಳಿಗೆ ತಿದ್ದುಪಡಿ ಮಾಡಿ ಅಧಿಸೂಚನೆ ಹೊರಡಿಸಲಾಗಿರುತ್ತದೆ.<br>ಅದರಂತೆ ಹೆಣ್ಣು ಮಕ್ಕಳ ವಸತಿ ಶಾಲೆಗಳ ಪ್ರಾಂಶುಪಾಲರ ಹುದ್ದೆಗೆ ಮಹಿಳಾ ಶಿಕ್ಷಕ ವೃಂದದಿಂದ ಮುಂಬಡ್ತಿ ನೀಡಲು ಇಲಾಖಾ ಮುಂಬಡ್ತಿ ಸಮಿತಿ ಸಭೆಯನ್ನು ಆಯೋಜಿಸಲು ಕ್ರಮವಹಿಸಲಾಗಿ, ಏತನ್ಮಧ್ಯ ದೈಹಿಕ ಶಿಕ್ಷಣ ಶಿಕ್ಷಕರು ಮತ್ತು ಕಂಪ್ಯೂಟರ್ ಶಿಕ್ಷಕರು ಹೊರಡಿಸಿರುವ ವೃಂದ ಮತ್ತು ನೇಮಕಾತಿ ವಿನಿಯಮಗಳ ತಿದ್ದುಪಡಿಗೆ ಸಂಬಂಧಿಸಿದಂತೆ ಮಾನ್ಯ ನ್ಯಾಯಾಲಯ ದಲ್ಲಿ ಪ್ರಕರಣ ದಾಖಲಿಸಿದ್ದು, ನ್ಯಾಯಾಲಯ ಅಂತಿಮ ಆದೇಶದಂತೆ ಮುಂದಿನ ಕ್ರಮವಹಿಸಲಾಗುವುದು. |

ಸಕಇ 203 ಎಂಡಿಎಸ್ 2025

(ಡಾ.ಹೆಚ್.ಸಿ ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು.